KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-117
ಶುಕ್ರವಾರ 07 ಮಾರ್ಚ್ 2025
Price: 2.00 Rs. Pages-2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ



ಚಿಕ್ಕನಾಯಕನಹಳ್ಳಿ ಪಟ್ಟಣದಲ್ಲಿ ನಡೆದಿರುವ 75ನೇ ವರ್ಷದ ಶಿವಸಪ್ತಾಹ ಕೊನೆಯ ದಿನದಂದು ದೇವರುಗಳ ಪಲ್ಲಕ್ಕಿ ಉತ್ಸವವು ಪ್ರಮುಖ ಬೀದಿಗಳಲ್ಲಿ ವಿಜೃಂಭಣೆಯಿಂದ ನಡೆಯಿತು.

ನಮ್ಮ ಸಂಪರ್ಕ: ಇ-ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ತುಮಕೂರಿನಲ್ಲಿ ನೀರಿನ ಬವಣೆ: ಜಿಲ್ಲಾಧಿಕಾರಿಗಳಿಂದ ವಾರ್ಡುಗಳ ಭೇಟಿ

ತುಮಕೂರು: ನೀರುಗಂಟಿ(ನೀರು ಸರಬರಾಜು ನೌಕರರು)ಗಳ ಮುಷ್ಕರದಿಂದ ಕಳೆದ 3 ದಿನಗಳಿಂದ ನಗರದಲ್ಲಿ ಉಲ್ಬಣಗೊಂಡಿದ್ದ ನೀರಿನ ತೀವ್ರ ಸಮಸ್ಯೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಬುಧವಾರ ರಾತ್ರಿ 8-30 ಗಂಟೆಗೆ 26ನೇ ವಾರ್ಡು ಅಶೋಕ್‌ನಗರಕ್ಕೆ ಭೇಟಿ ನೀಡಿ ಪರಿಶೀಲಿಸಿದರು.



ಸ್ಥಳೀಯ ನಿವಾಸಿಗಳಿಂದ ನೀರಿನ ಸಮಸ್ಯೆ ಕುರಿತು ಅಹವಾಲುಗಳನ್ನು ಆಲಿಸಿದ ಅವರು ತಕ್ಷಣದ ಪರಿಹಾರವಾಗಿ ಒಂದು ದಿನದ ಮಟ್ಟಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ನಿರ್ದೇಶನ ನೀಡಿದರು.

ನೀರು ಸರಬರಾಜು ನೌಕರರ ಮುಷ್ಕರದಿಂದ ನೀರಿನ ಸಮಸ್ಯೆ ಉಂಟಾಗಿದೆ. ಇನ್ನು ಮುಂದೆ ಎಂದಿನಂತೆ ನೀರು ಸರಬರಾಜು ಮಾಡಲಾಗುವುದು ಎಂದು ಸ್ಥಳೀಯ ನಿವಾಸಿಗಳಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸಮಾಧಾನದ ಮಾತುಗಳನ್ನು ಹೇಳಿದರು.

ಸ್ವಚ್ಛತೆ ಇಲ್ಲದಿರುವುದರಿಂದ ವಿಷ ಜಂತುಗಳ ಸಮಸ್ಯೆಯನ್ನು ಎದುರಿಸುತ್ತಿದ್ದು, ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕೆಂದು ನಿವಾಸಿಗಳು ಮನವಿ ಮಾಡಿದಾಗ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಕೂಡಲೇ ಜನರು ವಾಸಿಸುವ ಸ್ಥಳದ ಸುತ್ತಮುತ್ತ ಸ್ವಚ್ಛತಾ ಕಾರ್ಯ ಕೈಗೊಳ್ಳಬೇಕೆಂದು ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತ ಬಿ.ವಿ. ಅಶ್ವಿಜ, ಕಾರ್ಯನಿರ್ವಾಹಕ ಇಂಜಿನಿಯರ್ ಸಂದೀಪ್, ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## ವೈದ್ಯಾಧಿಕಾರಿ ಮನೆ ಮೇಲೆ 'ಲೋಕಾ' ದಾಳಿ

ತುಮಕೂರು: ಆದಾಯಕ್ಕಿಂತ ಹೆಚ್ಚು ಅಕ್ರಮವಾಗಿ ಆಸ್ತಿ ಗಳಿಸಿದ್ದಾರೆ ಎಂಬ ಆರೋಪದ ಮೇರೆಗೆ ಬೆಳ್ಳಂಬೆಳಗ್ಗೆ ತುಮಕೂರು ಲೋಕಾಯುಕ್ತ ಪೊಲೀಸರು ಸಿರಾ ತಾಲ್ಲೂಕಿನ ತಾವರೆಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಜಗದೀಶ್ ರವರ ಮನೆ ಸೇರಿದಂತೆ ಒಟ್ಟು ಆರು ಕಡೆ ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.




ಸಿರಾ ತಾಲೂಕು ತಾವರೆಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರಾಗಿರುವ ಡಾ. ಜಗದೀಶ್ ರವರ ತುಮಕೂರಿನ ಬಟವಾಡಿ ಬಳಿಯ ಮನೆ, ಸಿರಾ ತಾಲ್ಲೂಕಿನ ಫಾರಂ ಹೌಸ್, ಬರಗೂರಿನಲ್ಲಿರುವ ವಾಣಿಜ್ಯ ಕಟ್ಟಡ ಸೇರಿದಂತೆ ಆರು ಕಡೆ ಲೋಕಾಯುಕ್ತ ಪೊಲೀಸರು ಏಕಕಾಲದಲ್ಲಿ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲನೆ ನಡೆಸುತ್ತಿದ್ದಾರೆ.

ಆದಾಯಕ್ಕಿಂತ ಹೆಚ್ಚಿಗೆ ಆಸ್ತಿ ಗಳಿಸಿದ್ದಾರೆ ಹಾಗೂ ಅಕ್ರಮ ಆಸ್ತಿ ಗಳಿಕೆ ಆರೋಪದಡಿ ಲೋಕಾಯುಕ್ತ ಅಧಿಕಾರಿಗಳು ಬರಗೂರಿನಲ್ಲಿರುವ ವಾಣಿಜ್ಯ ಕಟ್ಟಡ, ತುಮಕೂರಿನ ಬಟವಾಡಿ ಬಳಿ ಇರುವ ಮನೆ, ಮಂಜುನಾಥ್ ನಗರದಲ್ಲಿರುವ ಕಾಂಪ್ಲೆಕ್ಸ್ ಮೇಲೆ ದಾಳಿ ನಡೆಸಿದ್ದಾರೆ. ಯಲ್ಲೆನಹಳ್ಳಿ ಗ್ರಾಮದ ವಾಸದ ಮನೆ, ಸಹೋದರ ಕಾಂತರಾಜ್ ಹಾಗೂ ಡಾ. ಜಗದೀಶ್ ಪತ್ನಿ ರೂಪ ಹೆಸರಿನಲ್ಲಿರುವ ಮನೆ ಜಮೀನಿನ ಮೇಲೂ ದಾಳಿ ಮಾಡಿ ದಾಖಲಾತಿಗಳ ಪರಿಶೀಲನೆ ನಡೆಸಿದಾಗ ಸಿರಾ ತಾಲ್ಲೂಕಿನ ಬರಗೂರಿನಲ್ಲಿ ತನ್ನ ತಾಯಿ ಹೆಸರಿನಲ್ಲಿ ಆಸ್ತಿ ಪತ್ತೆಯಾಗಿದೆ ಎಂದು ಹೇಳಲಾಗಿದೆ.

ಬರಗೂರಿನಲ್ಲಿ ಮೂರು ಕಡೆ, ತುಮಕೂರು ಸೇರಿದಂತೆ ಒಟ್ಟು 6 ಕಡೆ ದಾಳಿ ನಡೆಸಿರುವ ಲೋಕಾಯುಕ್ತ ಅಧಿಕಾರಿಗಳಿಗೆ ಮಹತ್ತರವಾದ ದಾಖಲೆಗಳನ್ನು ದೊರೆತಿದ್ದು, ಮತ್ತಷ್ಟು ತಪಾಸಣಾ ಕಾರ್ಯ ನಡೆಸಿದ್ದಾರೆ ಎಂದು ತಿಳಿದು ಬಂದಿದೆ.

ತುಮಕೂರು ಲೋಕಾಯುಕ್ತ ಎಸ್ಪಿ ಲಕ್ಷ್ಮೀನಾರಾಯಣ್ ನೇತೃತ್ವದಲ್ಲಿ ನಡೆದ ದಾಳಿಯಲ್ಲಿ ಡಿವೈಎಸ್ಪಿ ರಾಮಕೃಷ್ಣ ಕೆ.ಜಿ., ಇನ್ಸ್‌ಪೆಕ್ಟರ್‌ಗಳಾದ ಶಿವರುದ್ರಪ್ಪ ಮೇಟಿ, ಸುರೇಶ್, ಸಲೀಂ ಅಹಮದ್ ಮತ್ತು ಸಿಬ್ಬಂದಿಗಳು ಪಾಲ್ಗೊಂಡಿದ್ದು, ದಾಖಲಾತಿಗಳ ಪರಿಶೀಲನೆಯಲ್ಲಿ ತೊಡಗಿದ್ದಾರೆ. ಸಂಜೆ ವೇಳೆಗೆ ಸ್ಪಷ್ಟ ಮಾಹಿತಿ ದೊರೆಯಲಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

## ಕಗ್ಗೆರೆ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯ ರಥೋತ್ಸವ



ಕುಣಿಗಲ್: ಕಗ್ಗೆರೆ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯ ರಥೋತ್ಸವವು ರಾಜ್ಯದ ಎಲ್ಲೆಡೆಯಿಂದ ಆಗಮಿಸಿದ್ದ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿತು.

ತಾಲೂಕಿನ ಇತಿಹಾಸ ಪ್ರಸಿದ್ಧ ಕಗ್ಗೆರೆಯ ಸಿದ್ದಲಿಂಗೇಶ್ವರ ರಥೋತ್ಸವಕ್ಕಾಗಿ ರಾಜ್ಯದ ವಿವಿಧ ಕಡೆಯಿಂದ ಆಗಮಿಸಿದ್ದ ಭಕ್ತಾದಿಗಳು, ಯಡಿಯೂರು ಬಾಳೆಹೊನ್ನೂರು ಯಡಿಯೂರು ಶಾಖ ಮಠದ ಶ್ರೀ ರೇಣುಕಾ ಶಿವಾಚಾರ್ಯ ಸ್ವಾಮಿಜಿ, ಬೆಟ್ಟಳ್ಳಿ ಮಠದ ಚಂದ್ರಶೇಖರ ಸ್ವಾಮೀಜಿ ಹಾಗು ಅಪಾರ ಜಿಲ್ಲಾಧಿಕಾರಿಗಳಾದ ಡಾ. ಎನ್ ತಿಪ್ಪೇಸ್ವಾಮಿ ಅವರ ಸಮ್ಮುಖದಲ್ಲಿ ತೇರು ಎಳೆಯುವ ಮೂಲಕ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ರಸ್ತೆಯ ಇಕ್ಕಡೆಗಳಲ್ಲಿ ಬಿಸಿಲಿನ ಬೇಗೆಗೆ ಬಳಲಿದ ಭಕ್ತರಿಗೆ ನೀರು ಮಜ್ಜಿಗೆ ಪಾನಕ ಹಾಗು ಭಕ್ತರಿಗಾಗಿ ವಿಶೇಷ ಅರವಟ್ಟಿಗೆಯನ್ನು ವ್ಯವಸ್ಥೆ ಮಾಡಲಾಗಿತ್ತು. ಈ ಬಾರಿಯ ದೇವಸ್ಥಾನದ ಶೆಷ್ಟತಲಾ ಧ್ವಜವು ಹರಾಜಿನಲ್ಲಿ ಡಿಕೆ ಶಿವಕುಮಾರ್ ಅವರ ಹೆಸರಿನಲ್ಲಿ ಎರಡು ಲಕ್ಷ ರೂಗಳಿಗೆ ಹರಜು ಕೂಗುವ ಮೂಲಕ ಗೌಡ್ಗೆರೆಯ ಗಂಗಣ್ಣ ಪಡೆದುಕೊಂಡರು. ಈ ಸಂದರ್ಭದಲ್ಲಿ ಜಿಲ್ಲಾ ಅಪಾರ ಜಿಲ್ಲಾಧಿಕಾರಿಗಳಾದ ಡಾಕ್ಟರ್ ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿಗಳಾದ ಗೌರವ ಕುಮಾರ್ ಶೆಟ್ಟಿ, ತಹಶಿಲ್ದಾರ್ ಯು ರಶ್ಮಿ, ಯಡಿಯೂರು ದೇವಾಲಯದ ಕಾರ್ಯನಿರ್ವಹಣಾಧಿಕಾರಿ ಸುನಿಲ್ ಕುಮಾರ್, ಕಗ್ಗೆರೆಯ ಕಾರ್ಯದರ್ಶಿ ಹನುಮಂತ್ ಸೇರಿದಂತೆ, ಕಗ್ಗೆರೆಯ ದಿನೇಶ್, ಪ್ರಸಾದ್, ವಸಂತ್ ಸೇರಿದಂತೆ ಭಕ್ತರು ಇದ್ದರು.

## 'ಗುಬ್ಬಿ ಶಾಸಕರ ಬೆಂಬಲಿಗರಿಂದ ಸಚಿವದ್ವಯರ ಅವಹೇಳನ'

### ಎಸ್.ಆರ್. ಶ್ರೀನಿವಾಸ್ ವಿರುದ್ಧ ಪತ್ರಿಕಾಗೋಷ್ಠಿಯಲ್ಲಿ ಹಿಂದುಳಿದ ವರ್ಗಗಳ ಮುಂಖಂಡರ ವಾಗ್ದಾಳಿ

ತುಮಕೂರು: ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಅಧ್ಯಕ್ಷ ಸ್ಥಾನದ ಚುನಾವಣೆ ನಂತರ ಗುಬ್ಬಿ ಶಾಸಕರ ಬೆಂಬಲಿಗರು ಸಹಕಾರ ಸಚಿವಕೆ.ಎನ್.ರಾಜಣ್ಣ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ತೇಜೋವಧೆ ಪೋಸ್ಟ್‌ಗಳನ್ನು ಹಾಕುತ್ತಿರುವುದು, ಅವಮಾನಕಾರಿ ಹೇಳಿಕೆ ನೀಡುತ್ತಿರುವುದನ್ನು ಹಿಂದುಳಿದ ವರ್ಗಗಳ ಮುಖಂಡರುತೀವ್ರವಾಗಿ ಖಂಡಿಸಿದರು.



ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ವಿವಿಧ ಸಮಾಜಗಳ ಮುಖಂಡರು, ಗುಬ್ಬಿ ಶಾಸಕರ ಬೆಂಬಲಿಗರು ತೇಜೋವಧೆ ಮಾಡುವ ಚಟುವಟಿಕೆಯನ್ನು ಇಲ್ಲಿಗೇ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ಬಲಿಜ ಸಮಾಜದ ಮುಖಂಡ ಆಡಿಟರ್ ಟಿ.ಆರ್.ಆಂಜನಪ್ಪ ಮಾತನಾಡಿ, ನಮ್ಮ ಸಮಾಜಕ್ಕೆ ಕೆ.ಎನ್.ರಾಜಣ್ಣನವರು ಹೆಚ್ಚು ಸಹಾಯ ಮಾಡಿದ್ದಾರೆ. ಅವರ ವಿರುದ್ಧ ಅವಹೇಳನಾಕಾರಿಯಾಗಿ ಮಾತನಾಡಿ, ಅವಮಾನ ಮಾಡುವುದನ್ನು ನಿಲ್ಲಿಸಬೇಕು. ಇದು ಒಳ್ಳೆಯ ಬೆಳವಣಿಗೆಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

1996ರಿಂದ ಹಿಂದುಳಿದ ವರ್ಗಗಳು, ದಲಿತರರಿಗೆ ಯಾವುದೇ ರೀತಿಯ ಘಾಸಿಯಾಗುವಂತಹ ಪ್ರಕರಣ ನಡೆದಾಗ ಹಿಂದುಳಿದ ವರ್ಗಗಳ ಒಕ್ಕೂಟ ಅವರ ಬೆಂಬಲಕ್ಕೆ ನಿಂತು ಧ್ವನಿ ಮಾಡಿದೆ. ಹಿಂದುಳಿದ ವರ್ಗಗಳ ಅಂಗಗಳಾದ ಯಾವುದೇ ಸಣ್ಣಪುಟ್ಟಜಾತಿಗೆ ಅನ್ಯಾಯವಾದಾಗ ಒಕ್ಕೂಟ ಅವರ ಪರವಾಗಿ ಹೋರಾಟ ಮಾಡಿಕೊಂಡು ಬಂದಿದೆ. ನಾವು ಒಟ್ಟಾಗಿದ್ದೇವೆ ಎಂಬ ಸಂದೇಶ ನೀಡುತ್ತೇವೆ ಎಂದರು.

ತುಮಕೂರು ಹಾಲು ಒಕ್ಕೂಟದ ಅಧ್ಯಕ್ಷ ಚುನಾವಣೆ ವಿಚಾರವಾಗಿ ಜಿಲ್ಲಾ ಮಂತ್ರಿ ಡಾ.ಪರಮೇಶ್ವರ್, ಸಹಕಾರ ಮಂತ್ರಿ ಕೆ.ಎನ್.ರಾಜಣ್ಣ ಅವರು ಸಂಬಂಧಿಸಿದ ಎಲ್ಲರ ಅಭಿಪ್ರಾಯ ಪಡೆದು ಅದರಂತೆ ನಿರ್ಧಾರ ಕೈಗೊಂಡಿದ್ದಾರೆ. ಈಗ ಒಬ್ಬರು ಒಕ್ಕೂಟದ ಅಧ್ಯಕ್ಷರಾಗಿದ್ದಾರೆ. ಮುಂದೆ ಮತ್ತೊಬ್ಬರು ಆಗುತ್ತಾರೆ. ಅವಕಾಶ ಬರುವವರೆಗೆ ಕಾಯಬೇಕಾಗುತ್ತದೆ. ಆದರೆ ಇದೇ ನೆಪ ಮಾಡಿಕೊಂಡು ಸಚಿವಕೆ.ಎನ್.ರಾಜಣ್ಣ ಅವರನ್ನು ತೇಜೋವಧೆ ಮಾಡುವುದನ್ನು ಸಹಿಸಲಾಗುವುದಿಲ್ಲ. ಗುಬ್ಬಿ ಶಾಸಕರ ಬೆಂಬಲಿಗರು ಇನ್ನು ಮೇಲಾದರೂ ಕೆ.ಎನ್.ಆರ್ ವಿರುದ್ಧ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಾಕಾರಿ ಪ್ರತಿಕ್ರಿಯೆ ನೀಡುವುದನ್ನು ನಿಲ್ಲಿಸಲಿ ಎಂದು ಟಿ.ಆರ್.ಆಂಜನಪ್ಪ ಹೇಳಿದರು.

ನೇಕಾರ ಸಮಾಜದ ಮುಖಂಡ ಧನಿಯಾ ಕುಮಾರ್, ಡಿಎಸ್‌ಎಸ್ ಮುಖಂಡಕೊಟ್ಟ ಶಂಕರ್, ವಾಲ್ಮೀಕಿ ಸಮಾಜದ ಮುಖಂಡ ಸಿಂಗದಹಳ್ಳಿ ರಾಜ್‌ಕುಮಾರ್ ಮಾತನಾಡಿದರು.

ವಿವಿಧ ಸಮಾಜಗಳ ಮುಖಂಡರಾದ ಗಂಗಣ್ಣ, ಎಂ.ನಾಗರಾಜು, ಪಿ.ಮೂರ್ತಿ, ಮಂಜೇಶ್ ಒಲಿಂಪಿಕ್, ಶಾಂತ ಕುಮಾರ್, ನಾಗಮ್ಮ, ಡಮರುಗೇಶ್, ಮಲ್ಲಸಂದ್ರ ಶಿವಣ್ಣ, ಗುರುರಾಘವೇಂದ್ರ, ಎಂಡಿ.ಸತೀಶ್, ಚಂದ್ರಕಲಾ, ರಾಘವೇಂದ್ರಸ್ವಾಮಿ, ನಟೇಶ್ ಮೊದಲಾದವರು ಭಾಗವಹಿಸಿದ್ದರು.

## ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದ ವಿರುದ್ಧ ಜಿಲ್ಲಾ ಜೆಡಿಎಸ್ ಪ್ರತಿಭಟನೆ

ತುಮಕೂರು: ರಾಜ್ಯದ ಕಾಂಗ್ರೆಸ್ ಸರ್ಕಾರದ ಜನ ವಿರೋಧಿ ಆಡಳಿತ ಖಂಡಿಸಿ ಜಿಲ್ಲಾ ಜೆಡಿಎಸ್ ಗುರುವಾರ ನಗರದಲ್ಲಿ ಪ್ರತಿಭಟನೆ ಹಮ್ಮಿಕೊಂಡಿತ್ತು.



ಜಿಲ್ಲಾ ಜೆಡಿಎಸ್ ಕಚೇರಿಯಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆಯಲ್ಲಿ ಆಗಮಿಸಿದ ಮುಖಂಡರು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಿದರು. ನಂತರ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರು ಹಾಗೂ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಆರ್.ಸಿ.ಆಂಜನಪ್ಪ, ಯಾವುದೇ ಅಭಿವೃದ್ಧಿ ಕೆಲಸ ಮಾಡದ ಕಾಂಗ್ರೆಸ್ ಸರ್ಕಾರ, ದಿನಬಳಕೆ ಪದಾರ್ಥಗಳ ಬೆಲೆ ಏರಿಕೆ ಮಾಡಿ ಜನಸಾಮಾನ್ಯರಿಗೆ ಹೊರೆ ಹೇರಿದೆ. ಚುನಾವಣೆ ವೇಳೆ ಘೋಷಿಸಿದ ಐದು ಗ್ಯಾರಂಟಿ ಯೋಜನೆಗಳು ಚುನಾವಣೆ ಗೆಲ್ಲುವ ಅಸ್ತ್ರ ಮಾಡಿಕೊಂಡಿದೆ. ಗ್ಯಾರಂಟಿ ಯೋಜನೆಗಳಿಗಾಗಿ ಎಸ್.ಸಿ, ಎಸ್.ಟಿ. ಸಮುದಾಯದ ಅಭಿವೃದ್ಧಿಗೆ ಬಳಸಬೇಕಾದ ಹಣ ಬಳಸಿಕೊಂಡು ಆ ಸಮುದಾಯಗಳಿಗೆ ಅನ್ಯಾಯ ಮಾಡಿದೆ. ಪ್ರತಿ ತಿಂಗಳು ನೀಡಬೇಕಾದ ಗ್ಯಾರಂಟಿ ಯೋಜನೆ ಹಣವನ್ನು ಚುನಾಣೆ ಸಂದರ್ಭದಲ್ಲಿ ಕೊಟ್ಟು ಕಾಂಗ್ರೆಸ್ ನಾಯಕರು ಅಧಿಕಾರ ಹಿಡಿಯುವ ಹುನ್ನಾರ ಮಾಡಿಕೊಂಡು ಬರುತ್ತಿದ್ದಾರೆ. ಶಕ್ತಿ ಯೋಜನೆಯಲ್ಲಿ ಹೆಣ್ಣು ಮಕ್ಕಳಿಗೆ ಬಸ್ ಪ್ರಯಾಣ ಉಚಿತ ಎಂದು ಘೋಷಿಸಿ, ಮತ್ತೊಂದೆಡೆ ಬಸ್ ಪ್ರಯಾಣ ದರ ಹೆಚ್ಚು ಮಾಡಿ ಗಂಡಸರನ್ನು ಸುಲಿಗೆ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

ಮಾಜಿ ಶಾಸಕ ಕೆ.ಎಂ.ತಿಮ್ಮರಾಯಪ್ಪ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರದ ದುರಾಡಳಿತ ಖಂಡಿಸಿ ರಾಜ್ಯಾದ್ಯಂತ ಜೆಡಿಎಸ್ ಹೋರಾಟ ಮಾಡುತ್ತಿದೆ. ಚುನಾವಣೆ ಗೆಲ್ಲಲು ಗ್ಯಾರಂಟಿ ಯೋಜನೆಗಳನ್ನು ಬಳಸಿಕೊಳ್ಳುತ್ತಿರುವ ಕಾಂಗ್ರೆಸ್ ನವರು ಇದರ ಹೊರತಾಗಿ ಯಾವುದೇ ಜನಪರ ಕಾರ್ಯಕ್ರಮಗಳನ್ನು ಮಾಡುತ್ತಿಲ್ಲ ಎಂದರು.


ಮುಖ್ಯಮಂತ್ರಿ ಸಿದ್ದರಾಮಯ್ಯ 16ನೇ ಬಜೆಟ್ ಮಂಡನೆ ಮಾಡುತ್ತಿದ್ದಾರೆ. ಇದೂವರೆಗೂ ಬಜೆಟ್‌ನಲ್ಲಿ ಘೋಷಿಸಿದ ಕಾರ್ಯಕ್ರಮಗಳು ಕಾಗದದಲ್ಲೇ ಉಳಿದಿವೆ ಹೊರತು ಅನುಷ್ಠಾನಕ್ಕೆ ಬಂದಿಲ್ಲ. ಇದು ಕಾಂಗ್ರೆಸ್ ಆಡಳಿತದ ವೈಖರಿ ಎಂದರು.

ಜಿಲ್ಲಾ ಜೆಡಿಎಸ್ ಕಾರ್ಯಾಧ್ಯಕ್ಷ ಟಿ.ಆರ್.ನಾಗರಾಜು ಮಾತನಾಡಿದರು.

ಮಾಜಿ ಶಾಸಕ ಪಿ.ಆರ್.ಸುಧಾಕರ ಲಾಲ್, ಜೆಡಿಎಸ್ ರಾಜ್ಯ ಎಸ್ಟಿ ಮೋರ್ಚಾ ಉಪಾಧ್ಯಕ್ಷ ಸೋಲಾರ್ ಕೃಷ್ಣಮೂರ್ತಿ, ಮುಂಡರಾದ ತಿಮ್ಮಾರೆಡ್ಡಿ, ಹೆಚ್.ಡಿ.ಕೆ. ಮಂಜುನಾಥ್, ಧರಣೇಂದ್ರಕುಮಾರ್, ಯೋಗಾನಂದಕುಮಾರ್, ಟಿ.ಎಲ್.ಕುಂಭಯ್ಯ, ಮುದಿಮಡು ರಂಗಶಾಮಯ್ಯ, ಶ್ರೀನಿವಾಸಪ್ರಸಾದ್, ಟಿ.ಹೆಚ್.ಜಯರಾಮ್, ಗಂಗಣ್ಣ, ಪಾವಗಡ ಶ್ರೀರಾಮ್, ಗೋವಿಂದರಾಜು, ಗಣೇಶ್, ಕುಸುಮಾಜಗನ್ನಾಥ್, ತಾಹೇರಾಕುಲ್ಸಂ, ಲೀಲಾವತಿ, ಕೊರಟಗೆರೆ ಕಾಮರಾಜು, ದೊಡೇರಿ ಬಸವರಾಜು, ಉಪ್ಪಾರಹಳ್ಳಿ ಕುಮಾರ್, ಮಧುಗೌಡ, ನಾಗೇಶ್ ಸೇರಿದಂತೆ ವಿವಿಧ ತಾಲ್ಲೂಕುಗಳ ಅಧ್ಯಕ್ಷರು, ಪದಾಧಿಕಾರಿಗಳು ಭಾಗವಹಿಸಿದ್ದರು.

## ಎಸ್.ಡಿ.ಪಿ.ಐ. ಅಧ್ಯಕ್ಷರ ಅಕ್ರಮ ಬಂಧನ ಆರೋಪ; ತುಮಕೂರಿನಲ್ಲಿ ಪ್ರತಿಭಟನೆ

ತುಮಕೂರು: ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ತುಮಕೂರು ಜಿಲ್ಲಾ ಸಮಿತಿ ವತಿಯ ಕಾರ್ಯಕರ್ತರು ಈಡಿ ಮತ್ತು ಪ್ರಧಾನಿ ಮೋದಿಯವರ ವಿರುದ್ಧ ಆಕ್ರೋಶ ಭರಿತ ಪ್ರತಿಭಟನೆ ನಡೆಸಿದರು.




ರಾಷ್ಟ್ರೀಯ ಅಧ್ಯಕ್ಷ ಎಂ.ಕೆ.ಫೈಜಿ ರವರನ್ನು ಈಡಿಯವರು ಬಂಧಿಸಿರುವುದು ಸರಿಯಲ್ಲ ಎಂದು ಕೂಡಲೆ ಫೈಜಿಯವರನ್ನು ಬಿಡುಗಡೆ ಮಾಡಲು ಆಗ್ರಹಿಸಿದರು. ಈ ವೇಳೆ ಪ್ರತಿಭಟನೆ ನಡೆಸಲು ಪೊಲೀಸರಿಂದ ಅನುಮತಿ ಪಡೆದಿಲ್ಲವೆಂದು ತುಮಕೂರಿನ ತಿಲಕ್ ಪಾರ್ಕ್ ಪೊಲೀಸ್ ಠಾಣೆ ಪಿಎಸ್‌ಐ ರವರು ಎಸ್ ಡಿ ಪಿ ಐ. ಮುಖಂಡ ಮಕ್ತಿಯಾರ್ ಅವರನ್ನು ವಶಕ್ಕೆ ಪಡೆದರು. ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರಾದ ಶಫಿಉಲ್ಲಾ ಖಾನ್. ಉಪಾಧ್ಯಕ್ಷ ಅಲಿ ಮುಲ್ಲಾ ಶರೀಫ್. ಕಾರ್ಯದರ್ಶಿ ಚಾಂದ್ ಪಾಷ, ಮತ್ತು ಜಿಲ್ಲಾ ಸದ್ಯಸರು ಎಸ್ ಡಿ ಪಿ ಐ ಪಕ್ಷದ ಹಿರಿಯ ಮುಖಂಡರು. ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

### ಎಸ್‌ಐಟಿಯಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂದನ ಮಂಡಳಿ ಅಧ್ಯಕ್ಷ ಎಸ್.ಈ.ಸುಧೀಂದ್ರ

## 'ಜೈವಿಕ ಇಂಧನ ಕ್ಷೇತ್ರದ ಬೆಳವಣಿಗೆಗೆ ನಿರಂತರ ಪ್ರೋತ್ಸಾಹ'

ತುಮಕೂರು: ರಾಜ್ಯ ಸರಕಾರ ಜೈವಿಕ ಇಂದನ ಕ್ಷೇತ್ರದ ಬೆಳವಣಿಗೆಗೆ ನಿರಂತರ ಪ್ರೋತ್ಸಾಹ ನೀಡುತ್ತಾ ಬಂದಿದ್ದು,ಇದರ ಪರಿಣಾಮವಾಗಿ ಇಂದು ರಾಜ್ಯದಲ್ಲಿ 34 ಬೈಯೋ ಪಿಯಲ್ ಸಂಶೋಧನಾ ಕೇಂದ್ರಗಳು ಚಾಲನೆಯಲ್ಲಿವೆ ಎಂದು ಕರ್ನಾಟಕ ರಾಜ್ಯ ಜೈವಿಕ ಇಂದನ ಮಂಡಳಿ ಅಧ್ಯಕ್ಷ ಎಸ್.ಈ.ಸುಧೀಂದ್ರ ತಿಳಿಸಿದ್ದಾರೆ



ನಗರದ ಎಸ್.ಐ.ಟಿಯ ಮಾಧ್ಯಮ ಕೇಂದ್ರದಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂದನ ಅಭಿವೃದ್ಧಿ ಮಂಡಳಿ ,ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ, ಸಿದ್ದಗಂಗಾ ತಾಂತ್ರಿಕ ಮಹಾವಿದ್ಯಾಲಯದ ಸಹಯೋಗದಲ್ಲಿ ಜೈವಿಕ ಇಂದನ ಸಂಶೋಧನೆ, ಮಾಹಿತಿ ಮತ್ತು ಕೇಂದ್ರದ ಸಂಯೋಜಕರು ಮತ್ತು ಯೋಜನಾ ಸಿಬ್ಬಂದಿಯವರಿಗೆ ಹಮ್ಮಿಕೊಂಡಿದ್ದ ಜೈವಿಕ ಇಂಧನ ತಂತ್ರಜ್ಞಾನ ಕುರಿತ ಕಾರ್ಯಾಗಾರ ಮತ್ತು ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದ ಅವರು, ದೇಶವು ಅಭಿವೃದ್ಧಿಪಥದಲ್ಲಿ ಸಾಗುತ್ತಿರುವ ಈ ಮಹತ್ವದ ಸಂದರ್ಭದಲ್ಲಿ ಜೈವಿಕ ಇಂಧನ ಕ್ಷೇತ್ರವು ತನ್ನದೇ ಆದ ಭೂಮಿಕೆಯನ್ನು ಪ್ರಸ್ತುತ ಪಡಿಸಲಿದ್ದು ಮುಂದಿನ ದಿನಗಳಲ್ಲಿ ಭವಿಷ್ಯದ ಇಂಧನವಾಗಿ, ಶಕ್ತಿಮೂಲವಾಗಿ ಹೊರ ಹೊಮ್ಮುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದರು.

ರಾಜ್ಯದ ಮುಖ್ಯಮಂತ್ರಿಗಳು ಅಭಿವೃದ್ಧಿಗೆ ಅಪಾರ ಕಾಳಜಿಯನ್ನು ಹೊಂದಿದ್ದು ಮುಂದಿನ ದಿನಗಳಲ್ಲಿ ರಾಜ್ಯದ ಬೆಳವಣಿಗೆಯಲ್ಲಿ ಬಹು ಮುಖ್ಯ ಪಾತ್ರವಹಿಸಲಿದ್ದು ಆದ್ಯತೆ ಮೇರೆಗೆ ಕಾರ್ಯ ಯೋಜನೆ ರೂಪಿಸಲು ವೈಯಕ್ತಿಕವಾಗಿ ಸಲಹೆ ನೀಡಿರುವುದನ್ನು ಸ್ಮರಿಸಿದರು. ಇತ್ತೀಚಿಗೆ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಸಚಿವರಾದ ಕೆ.ಎಚ್. ಮುನಿಯಪ್ಪನವರನ್ನು ಭೇಟಿಯಾಗಿ ಮಂಡಳಿಯನ್ನು ರಾಜ್ಯದಲ್ಲಿ ಜೈವಿಕ ಇಂಧನ ಬಯೋಡೀಸಲ್ ರಿಟೇಲ್ ಔಟ್ಲೆಟ್ ಗಳನ್ನು ಆರಂಬಿಸಲು ಅಗತ್ಯ ಓಔಅ ಗಳನ್ನು ನೀಡಲು ನೋಡಲ್ ಏಜೆನ್ಸಿಯಾಗಿ ನೇಮಿಸಲು ಕೋರಿದ್ದು ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು ಇನ್ನೊಂದು ವಾರದಲ್ಲಿ ಕ್ರಮವಹಿಸುವುದಾಗಿ ತಿಳಿತಿರುವುದನ್ನು ವಿವರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ವಿಜ್ಞಾನ, ತಂತ್ರಜ್ಞಾನ ಮಂಡಳಿಯ ಡಾ.ಯು.ಟಿ.ವಿಜಯ್, ಕರ್ನಾಟಕ ವಿಜ್ಞಾನ ತಂತ್ರಜ್ಞಾನ ಅಭಿವೃದ್ಧಿ ಮಂಡಳಿ ಆರಂಬವಾಗಿ ಐವತ್ತು ವರ್ಷಗಳು ಪೂರೈಸಿದ್ದು, ಸರಕಾರದ ಸಹಭಾಗಿತ್ವದಲ್ಲಿ ಪರ್ಯಾಯ ಇಂದನಗಳ ಸಂಶೋಧನೆ,ಮಳೆ ನೀರು ಕೊಯ್ಲು,ಅಂತರಜಲ ವೃದ್ದಿ,ನೀರಿನ ಸಂರಕ್ಷಣೆಯಲ್ಲಿ ತೊಡಗಿದೆ ಎಂದರು.

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಶಿವಶಂಕರ್ ಎಲ್. ಮಾತನಾಡಿ, ವಾಯು ಗುಣದಲ್ಲಿರುವ ಕಾರ್ಬನ್ ಡೈಯಾಕ್ಸೈಡ್‌ನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ವಿಶ್ವದ್ಯಾಂತ ಜೈವಿಕ ಇಂಧನ ಉತ್ಪಾಧನೆಗೆ ಹೆಚ್ಚು ಒತ್ತು ನೀಡಲಾಗಿದೆ. ಹೊಂಗೆ, ಬೇವು, ಸಿಮರೂಬ್, ಜಟ್ರೋಪ, ಬಸಳಿ ಎಸೆಯಲ್ಪಡುವ ಅಡುಗೆ ಎಣ್ಣೆ ಇನ್ನಿತರ ಮೂಲಗಳಿಂದ ಜೈವಿಕ ಇಂಧನ ಸಂಶೋಧನೆ ಹೆಚ್ಚಿನ ರೀತಿಯಲ್ಲಿ ನಡೆದಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ಐ.ಟಿ. ಸಿಇಓ ಡಾ.ಶಿವಕುಮಾರಯ್ಯ ಮಾತನಾಡಿದರು. ವೇದಿಕೆಯಲ್ಲಿ ಎಸ್.ಐ.ಟಿ. ಪ್ರಾಂಶುಪಾಲ ಡಾ.ದಿನೇಶ್, ಡಿ.ಸಿ.ಎಫ್ ಲೋಹಿತ್ ಬಿ ಆರ್, ಯೋಜನಾ ಸಲಹೆಗಾರರಾದ ಡಾ.ದಯಾನಂದ ಜಿಎನ್, ಕೆ.ಎಸ್, ಸಿ.ಎಸ್.ಟಿ ಯ ಕಾರ್ಯ ನಿರ್ವಾಹಕ ಕಾರ್ಯದರ್ಶಿ ಡಾ.ಯು.ಟಿ. ವಿಜಯ್, ಮೆಕಾನಿಕಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ಯು.ಎಸ್ ಮಲ್ಲಿಕಾರ್ಜುನ್, ಬಿ ಆರ್ ಐ ಐ ಡಿ ಸಿ ಕೇಂದ್ರದ ಸಂಯೋಜಕರಾದ ಡಾ. ಓಂಕಾರೇಶ್, ಸಾಮಾಜಿಕ ಅರಣ್ಯ ವಿಭಾಗದ ಡಿಎಫ್‌ಓ ದೇವರಾಜು ಪಾಲ್ಗೊಂಡಿದ್ದರು.

# ಹಕ್ಕಿ ಜ್ವರ ಮುಂಜಾಗ್ರತೆಗೆ ತಾಲೂಕಿನ ಎರಡು ಕಡೆ ಚೆಕ್ ಪೋಸ್ಟ್ ಅಳವಡಿಕೆ



ಪಾವಗಡ. ನೆರೆಯ ಆಂಧ್ರ ಹಾಗೂ ತೆಲಂಗಾಣ ಗಳಲ್ಲಿ ಹಕ್ಕಿ ಜ್ವರ ತೀವ್ರ ಸ್ವರೂಪ ಪಡೆದು ಕೊಳ್ಳುತ್ತಿರುವ ಹಿನ್ನೆಲೆಯಲ್ಲಿ ಆಂಧ್ರ ಪ್ರದೇಶಕ್ಕೆ ಹೊಂದಿಕೊಂಡಿರುವಂತಹ ತುಮಕೂರು ಜಿಲ್ಲೆಯ ಪಾವಗಡ ತಾಲೂಕಿನಲ್ಲಿ ಎರಡು ಚೆಕ್ ಪೋಸ್ಟ್ ಗಳನ್ನು ಪಶುಪಾಲನಾ ಇಲಾಖೆಯ ಅಧಿಕಾರಿಗಳು ನಿರ್ಮಿಸಿ ರಾಜ್ಯಕ್ಕೆ ಪ್ರವೇಶಿಸುವಂತಹ ಕೋಳಿಗಳನ್ನು ಪರಿಚಯಿಸುತ್ತಿದ್ದಾರೆ, ತಾಲೂಕಿನ ದೊಮ್ಮತಮರಿ ಹಾಗೂ ನಾಗಲಾಪುರ ಗ್ರಾಮಗಳ ಬಳಿ ತೆರೆಯಲಾಗಿದೆ.

ಪಶು ಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಹೊರಕೆರಪ್ಪ ಗುರುವಾರ ಪತ್ರಿಕೆಯೊಡನೆ ಮಾತನಾಡಿ, ಜನರು ಭಯ ಪಡುವ ಅಗತ್ಯವಿಲ್ಲ, ತುಮಕೂರು ಜಿಲ್ಲೆಯಲ್ಲಿ ಯಾವುದೇ ರೀತಿಯ ಹಕ್ಕಿ ಜ್ವರ ಕಂಡು ಬಂದಿಲ್ಲಾ, ರಾಜ್ಯದ ಚಿಕ್ಕಬಳ್ಳಾಪುರ ಮತ್ತು ಬಳ್ಳಾರಿ ಕೆಲ ಕಡೆ ಈ ಕಾಯಿಲೆ ಪತ್ತೆಯಾಗಿದ್ದು, ಇಲಾಖೆಯ ಮಾರ್ಗಸೂಚಿ ಪ್ರಕಾರ ಕೆಲಸ ಮಾಡಿತ್ತಿದ್ದೇವೆ ಮತ್ತು ಎಲ್ಲಿಯಾದರೂ ಹೆಚ್ಚಿನ ಸಂಖ್ಯೆಯಲ್ಲಿ ಕೋಳಿಗಳು ಸಾವನ್ನಪ್ಪಿದರೆ ,ಹತ್ತಿರ ಪಶು ಹಾರೈಕೆ ಕೇಂದ್ರಕ್ಕೆ ಮಾಹಿತಿ ನೀಡಿ ಸದ್ಯ ಪಾವಗಡ ತಾಲೂಕಿನಲ್ಲಿ 90 ಕೋಳಿ ಪಾರಂಗಳಿದ್ದು 6 ಲಕ್ಷಕ್ಕೂ ಅಧಿಕ ಕೋಳಿಗಳಿದ್ದು ಇದರಲ್ಲಿ 6 ಮೋಟ್ಟೆ ಪಾರಂ ಗಳಿದ್ದು ಇವುಗಳಲ್ಲಿ 60 ಸಾವಿರಕ್ಕೂ ಅಧಿಕ ಕೋಳಿಗಳಿದ್ದು 50 ಸಾವಿರ ಇತ್ತಲ ಕೋಳಿಗಳಿವೆ ಎಂದಿದ್ದಾರೆ.



ತಿಪಟೂರು ವೈಭವಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ವತಿಯಿಂದ ತಾಲೂಕಿನ ಹೊನ್ನವಳ್ಳಿ ಹೋಬಳಿಯ ನಾಗತಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವದ ಅಂಗವಾಗಿ ಎಲ್ಲಾ ಮಕ್ಕಳಿಗೆ ಟ್ರಾಕ್‌ಸೂಟ್ ವಿತರಣೆ ಮಾಡಲಾಯಿತು. ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಮಧುಸೂಧನ್ ಶಾಲಾ ಶಿಕ್ಷಕರು ಹಾಗೂ ಗ್ರಾಮಸ್ಥರಿದ್ದರು.

# ಉಪಸ್ಥಾವರ ವಿದ್ಯುದ್ದೀಕರಣ: ಸಾರ್ವಜನಿಕರಿಗೆ ಎಚ್ಚರಿಕೆ

ತುಮಕೂರು: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬ ಹೋಬಳಿ ಜಿ.ಹೊಸಹಳ್ಳಿ ಗ್ರಾಮದ ಬಳಿ ನೂತನವಾಗಿ ನಿರ್ಮಾಣ ಮಾಡುವ 110/11ಕೆವಿ ಉಪಸ್ಥಾವರಕ್ಕೆ ಮಾರ್ಚ್ 7 ಅಥವಾ ತದನಂತರ ಹಾಲಿ ಇರುವ 110ಕೆವಿ ನಿಟ್ಟೂರು–ಕೆ.ಜಿ.ಟೆಂಪಲ್ ಏಕಮುಖ ವಿದ್ಯುತ್ ಮಾರ್ಗದಿಂದ 5.771 ಕಿಮೀ ಉದ್ದದ ದ್ವಿಮುಖ ಗೋಪುರಗಳ ಮೇಲೆ ಲಿಲೋ ವಿದ್ಯುತ್ ಮಾರ್ಗವನ್ನು ವಿದ್ಯುದ್ದೀಕರಣಗೊಳಿಸಲಾಗುವುದು.

ಸಾರ್ವಜನಿಕರು ಈ ಉಪಸ್ಥಾವರದ ಗೋಪುರವನ್ನು ಹತ್ತುವುದು, ಲೋಹದ ತಂತಿ, ಹಸಿರು ಬಳ್ಳಿ, ಕೊಂಬೆ, ಮತ್ತಿತರ ವಸ್ತುಗಳನ್ನು ಪ್ರಸರಣ ಮಾರ್ಗಕ್ಕೆ ಎಸೆಯುವುದು, ದನ–ಕರು ಮತ್ತಿತರ ಜಾನುವಾರುಗಳನ್ನು ವಿದ್ಯುತ್ ಗೋಪುರಕ್ಕೆ ಕಟ್ಟುವುದನ್ನು ನಿರ್ಬಂಧಿಸಲಾಗಿದೆ. ಒಂದು ವೇಳೆ ನಿರ್ಬಂಧಿತ ಚಟುವಟಿಕೆಗಳನ್ನು ನಡೆಸಿ ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ನಿಗಮವು ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗಿರುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ.

ಈ ಪ್ರಸರಣ ಮಾರ್ಗವು ಜಿಲ್ಲೆಯ ಗುಬ್ಬಿ ತಾಲ್ಲೂಕು ಕಸಬಾ ಹೋಬಳಿ ಸುರಿಗೇನಹಳ್ಳಿ ಕಾವಲ್, ಕೊನೆಮಾದೇನಹಳ್ಳಿ, ಕಟ್ಟಿಗೇನಹಳ್ಳಿ ಮತ್ತು ಜಿ. ಹೊಸಹಳ್ಳಿ ಗ್ರಾಮಗಳ ಸರಹದ್ದಿನಲ್ಲಿ ಹಾದುಹೋಗಿದೆ ಎಂದು ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ತಿಳಿಸಿದ್ದಾರೆ.

# ಆಯುಷ್ಮಾನ್ ಯೋಜನೆ ಹಣ ರಾಜ್ಯ ಸರ್ಕಾರವೇ ಭರಿಸುತ್ತಿದೆ



ಬೆಂಗಳೂರು: ಆಯುಷ್ಮಾನ್ ಭಾರತ್ – ಆರೋಗ್ಯ ಕರ್ನಾಟಕ ಯೋಜನೆಯಡಿ ಚಿಕಿತ್ಸಾ ವೆಚ್ಚಗಳನ್ನ ಪರಿಷ್ಕರಿಸಿದರೆ ಯೋಜನೆಯ ಶೇ 90 ರಷ್ಟು ಅನುದಾನವನ್ನು ರಾಜ್ಯ ಸರ್ಕಾರ ವೇ ಭರಿಸುವ ಪರಿಸ್ಥಿತಿ ನಿರ್ಮಾಣ ವಾಗಲಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ವಿಧಾನ ಸಭೆಯಲ್ಲಿ ಗುರುವಾರ ಶಾಸಕ ವೇದವ್ಯಾಸ್ ಕಾಮತ್ ಅವರ ಪ್ರಶ್ನೆಗೆ ಉತ್ತರಿಸುವ ವೇಳೆ ಮಾತನಾಡಿದ ಸಚಿವರು, ಕೇಂದ್ರದ ನೀತಿಗಳ ಪ್ರಕಾರ ಆಯುಷ್ಮಾನ್ ಭಾರತ್ ಯೋಜನೆಗೆ ಕೇಂದ್ರ ಸರ್ಕಾರ ಶೇ 60 ರಷ್ಟು ಹಾಗೂ ರಾಜ್ಯ ಸರ್ಕಾರ ಶೇ 40 ರಷ್ಟು ಅನುದಾನವನ್ನು ಒದಗಿಸಬೇಕು. ಆದರೆ ಕರ್ನಾಟಕದಲ್ಲಿ ಪ್ರಸ್ತುತ ಆಯುಷ್ಮಾನ್ ಭಾರತ್ ಯೋಜನೆಗೆ ರಾಜ್ಯ ಸರ್ಕಾರವೇ ಶೇ 75 ರಷ್ಟು ಹಣಕಾಸಿನ ನೆರವನ್ನ ಒದಗಿಸುತ್ತಿದೆ ಎಂದರು.

ಕೇಂದ್ರ ಸರ್ಕಾರ ಕೇವಲ ಶೇ 25 ರಷ್ಟು ಅನುದಾನ ನೀಡುತ್ತಿದೆ. ಇನ್ನು ಯೋಜನೆಯಡಿ ಚಿಕಿತ್ಸಾ ವೆಚ್ಚಗಳು 2018 ರಿಂದ ಪರಿಷ್ಕರಣೆ ಆಗಿಲ್ಲ. ಪರಿಷ್ಕರಣೆಗೆ ಮುಂದಾದರೆ ಯೋಜನೆಗೆ ರಾಜ್ಯ ಸರ್ಕಾರವೇ ಶೇ 90 ರಷ್ಟು ಅನುದಾನ ಭರಿಸುವ ಪರಿಸ್ಥಿತಿ ನಿರ್ಮಾಣವಾಗಲಿದೆ. ಕೇಂದ್ರ ಸರ್ಕಾರದ ಅನುದಾನದ ಪಾಲು ಶೇ 10 ಕ್ಕೆ ಬಂದು ನಿಲ್ಲಲಿದೆ ಎಂದು ವಿವರಿಸಿದರು.

# ನಾಮದ ಚಿಲುಮೆಯಲ್ಲಿ ಅನುಮತಿ ಇಲ್ಲದೆ ಚಿತ್ರೀಕರಣ ಆರೋಪ: ಪ್ರಕರಣ ದಾಖಲು

ತುಮಕೂರು: ಪುರಾಣ ಪ್ರಸಿದ್ಧ ನಾಮದ ಚಿಲುಮೆಯಲ್ಲಿ ಅನುಮತಿ ಇಲ್ಲದೆ ರಾತ್ರಿ ವೇಳೆ ಚಿತ್ರೀಕರಣ ಮಾಡುತ್ತಿದ್ದಾರೆಂಬ ಆರೋಪದ ಹಿನ್ನೆಲೆಯಲ್ಲಿ ಅರಣ್ಯ ಅಧಿಕಾರಿಗಳು ದಾಳಿ ನಡೆಸಿ, ಚಿತ್ರೀಕರಣ ಸಾಮಗ್ರಿಗಳನ್ನು ವಶಪಡಿಸಿಕೊಂಡು ಎಫ್‌ಐಆರ್ ದಾಖಲಿಸಿದ್ದಾರೆ.

ಬುಧವಾರ ರಾತ್ರಿ 10 ಗಂಟೆ ಸಮಯದಲ್ಲಿ ನಾಮದ ಚಿಲುಮೆಗೆ ಒಳ ಹೋಗುವ ಗೇಟ್ ಮುಂಭಾಗ ಲೈಟ್‌ಗಳನ್ನು ಹಾಕಲಾಗಿತ್ತು. ನಟಿ ರಕ್ಷಿತಾ ಸಹೋದರ ರಾಣ ನಟಿಸುತ್ತಿದ್ದ ಚಿತ್ರದ ಚಿತ್ರೀಕರಣಕ್ಕೆ ಸಿದ್ಧತೆ ಮಾಡಿಕೊಂಡಿತ್ತು ಎನ್ನಲಾಗಿದೆ. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನೇತೃತ್ವದಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ದಾಳಿ ನಡೆಸಿದೆ. ಅರಣ್ಯಕ್ಕೆ ಅತಿಕ್ರಮ ಪ್ರವೇಶ ಆರೋಪದಡಿ ಎಫ್‌ಐಆರ್ ದಾಖಲು ಮಾಡಲಾಗಿದೆ ಎಂದು ಡಿಎಫ್‌ಒ ಎಚ್.ಅನುಪಮಾ ತಿಳಿಸಿದ್ದಾರೆ.

ಊಟಕ್ಕೆ ನಿಲ್ಲಿಸಿದ್ದೆವು: ಚಿತ್ರೀಕರಣಕ್ಕೆ ಅನುಮತಿ ಕೋರಿ ಮೊದಲೇ ಅರ್ಜಿ ಸಲ್ಲಿಸಲಾಗಿತ್ತು. ಇನ್ನೂ ಅನುಮತಿ ಸಿಕ್ಕಿರಲಿಲ್ಲ. ಸ್ಥಳದಲ್ಲಿ ಚಿತ್ರೀಕರಣ ಮಾಡಿಲ್ಲ. ಹೊರಗಡೆ ಚಿತ್ರೀಕರಣ ಮುಗಿಸಿ ಈ ಸ್ಥಳದಲ್ಲಿ ಊಟಕ್ಕೆ ತಂಗಿದ್ದಾಗಿ ಚಿತ್ರತಂಡ ಹೇಳಿಕೊಂಡಿದೆ.

# ಎಪಿಎಂಸಿಯಲ್ಲಿ ಜಾಗವಿದ್ದರೂ ರಾಗಿ ಖರೀದಿ ಮಾತ್ರ ಬಾಡಿಗೆ ಸ್ಥಳದಲ್ಲಿ

## ತಿಂಗಳಿಗೆ 50 ಸಾವಿರ ಬಾಡಿಗೆ; ರಾಗಿ ಮಾರಾಟಕ್ಕೆ ತರುವ ರೈತರಿಗಿಲ್ಲ ನೀರು ನೆರಳು



" ತಿಪಟೂರು ಎಪಿಎಂಸಿಯಲ್ಲಿ ರಾಗಿ ಖರೀದಿಗೆ ವಿಶಾಲ ಜಾಗವಿದ್ದರೂ ನಿಗಮದವರು ಬೇರೆಡೆ ರಾಗಿ ಖರೀದಿಸುತ್ತಿರುವ ಮರ್ಮ ತಿಳಿಯುತ್ತಿಲ್ಲ. ರಾಗಿ ತರುವ ರೈತರಿಗೆ ನೆರಳು, ನೀರಿನ ವ್ಯವಸ್ಥೆ ಇಲ್ಲ. ಒಂದು ವೇಳೆ ರೈತ ತಂದ ರಾಗಿಯನ್ನು ಮರುದಿನ ಖರೀದಿಸಿದರೆ ಆತ ಉಳಿಯಲು ಜಾಗವಿಲ್ಲ. ಎಪಿಎಂಸಿಯಲ್ಲಾಗಿದ್ದರೆ ಕಾವಲುಗಾರರ ವ್ಯವಸ್ಥೆಯಿತ್ತು ಮುಖ್ಯದ್ವಾರವನ್ನು ಹಾಕುವುದರಿಂದ ರೈತರಲ್ಲಿ ಭಯವಿರುತ್ತಿರಲಿಲ್ಲ. ಬಾಡಿಗೆ ನೀಡಿ ರಾಗಿ ಖರೀದಿಸುವುದರ ಉದ್ದೇಶ ತಿಳಿಯುತ್ತಿಲ್ಲ. ಒಟ್ಟಾರೆ ಸರ್ಕಾರದ ಹಣ ವೃಥಾ ವ್ಯಯವಾಗುತ್ತಿದೆ."

– ಭೋಜರಾಜು, ಅಧ್ಯಕ್ಷರು, ಸದೃಢ ಫೌಂಡೇಶನ್, ತಿಪಟೂರು.

ತಿಪಟೂರು: ತಿಪಟೂರು ಎಪಿಎಂಸಿ ಏಷ್ಯಾದಲ್ಲಿಯೇ ಪ್ರಸಿದ್ದಿ ಪಡೆದಿದ್ದು ವಿಶಾಲವಾದ ಜಾಗವನ್ನು ಸಹ ಹೊಂದಿದ್ದು ಎಲ್ಲಾ ಸೌಲಭ್ಯಗಳಿಂದ ಕೂಡಿರುವ ಎಪಿಎಂಸಿ ಇದ್ದರೂ ರಾಗಿ ಖರೀದಿಯನ್ನು ಮಾತ್ರ ನಗರದ ಬೇರೊಂದು ಬಾಡಿಗೆ ಸ್ಥಳದಲ್ಲಿ ರೈತರಿಂದ ಖರೀದಿಸುತ್ತಿರುವುದು ಅನುಮಾನಕ್ಕೆಡೆ ಮಾಡಿಕೊಟ್ಟಿದೆ.

ಕರ್ನಾಟಕದಲ್ಲೇ ಅತಿ ಹೆಚ್ಚು ಕೊಬ್ಬರಿ ಖರೀದಿ ನಡೆಯುವ ಮಾರುಕಟ್ಟೆ ತಿಪಟೂರು ಎಪಿಎಂಸಿಯಾಗಿದ್ದು ಕೃಷಿ ಮಾರಾಟ ಮಹಾಮಂಡಳದ ಮೂಲಕ ಯಶಸ್ವಿಯಾಗಿ ನಡೆಯುತ್ತಿದೆ. ಇದೇ ಎಪಿಎಂಸಿಯ ಒಳಗಡೆ ಎಪಿಎಂಸಿ ಯಿಂದ ರಾಗಿ ಖರೀದಿಗೆ ಯಾವುದೇ ಬಾಡಿಗೆ ಇಲ್ಲದೆ ಸುಸಜ್ಜಿತವಾದ ಸಾಕಷ್ಟು ಕಟ್ಟಡ, ವಿದ್ಯುತ್, ನೀರಿನ ವ್ಯವಸ್ಥೆ ಎಲ್ಲವನ್ನು ಕಲ್ಪಿಸಲಾಗಿದ್ದು ರೈತರಿಂದ ರಾಗಿ ಖರೀದಿಗೆ ಹೆಸರು ನೋಂದಾವಣಿ ಪ್ರಕ್ರಿಯೆಯೂ ಸಹ ಇಲ್ಲೇ ನಡೆದಿದೆ.

ಆದರೂ ಕೂಡ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದವರು ದಿಡೀರ್ ರಾಗಿ ಖರೀದಿ ಪ್ರಕ್ರಿಯೆಯನ್ನು ಮಾತ್ರ ಎಪಿಎಂಸಿಯಿಂದ ಹೊರಗೆ ಬಾಡಿಗೆ ಕಟ್ಟಡದಲ್ಲಿ ನಡೆಸುತ್ತಿರುವುದು ಏಕೆ ಎಂಬುದು ಅರ್ಥವಾಗುತ್ತಿಲ್ಲ. ಈಗ ಖರೀದಿ ಪ್ರಾರಂಭಿಸಿರುವ ಜಾಗದಲ್ಲಿ ರಾಗಿ ತಂದಂತಹ ರೈತರು ತಮ್ಮ ವಾಹನಗಳ ಜೊತೆ ಬಿಸಿಲಿನಲ್ಲಿ ನೀರು ನೆರಳಿಲ್ಲದೆ ರಸ್ತೆ ಬದಿಯಲ್ಲಿ ನಿಲ್ಲಬೇಕಾದ ಪರಿಸ್ಥಿತಿ ಇದೆ. ಯಾವ, ಯಾವ ಅನುಕೂಲಕ್ಕಾಗಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದವರು ಈ ರೀತಿ ಮಾಡುತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕಾಗಿದೆ. ಮಾ.3ರ ಸೋಮವಾರದಂದು ಎಪಿಎಂಸಿ ಒಳಗಡೆ ರಾಗಿ ಖರೀದಿಗಾಗಿ ರಾಗಿ ರಾಶಿಗೆ ಪೂಜೆ ಮಾಡಿದ ಅಧಿಕಾರಿಗಳು, ಮಂಗಳವಾರ ಅಮಾಲರ ನಡುವೆ ನಡೆದ ಗಲಾಟೆಯಿಂದ ರಾಗಿ ಖರೀದಿ ನಿಂತು ಹೋಗಿತ್ತು. ಮತ್ತೆ ಬುಧವಾರ ಎಪಿಎಂಸಿಯಿಂದ ಹೊರಗಡೆ ಅಂದರೆ, ದೂರದ ಬಂಡಿಹಳ್ಳಿ ಸಮೀಪದ ಗೋಡನ್‌ನಲ್ಲಿ ತಿಂಗಳಿಗೆ 50ಸಾವಿರ ರೂ ಬಾಡಿಗೆ ನೀಡಿ ರಾಗಿ ಖರೀದಿ ಪ್ರಾರಂಭಿಸಿದ್ದಾರೆ.

ಸ್ಥಳದ ಬಗ್ಗೆ ಮಾಹಿತಿ ಇಲ್ಲದ ರೈತರು ಎಪಿಎಂಸಿ ಬಳಿ ಬಂದು ಹೋಗುತ್ತಿದ್ದಾರೆ. ರೈತರು ರಾಗಿ ಚೀಲಗಳನ್ನು ಟ್ರ್ಯಾಕ್ಟರ್ ಗಳಲ್ಲಿ ತರುವುದರಿಂದ ಇಲ್ಲಿ ನಿಲ್ಲಿಸಲು ಸ್ಥಳದ ಅಭಾವವಿದೆ. ಅಲ್ಲದೆ ರಾಗಿ ತಂದ ದಿನವೇ ರಾಗಿ ಖರೀದಿಸಿದರೆ ಸರಿ.

ಇಲ್ಲವಾದಲ್ಲಿ ರೈತರು ತಮ್ಮ ಮಾಲಿನೊಂದಿಗೆ ಬೀದಿಯಲ್ಲಿ ಕಾರ್ಗತ್ತಲಿನಲ್ಲಿ ಮಲಗುವ ಸ್ಥಿತಿ ಬಂದೊದಗಿದೆ. ನಿಗಮದವರು ಯಾವುದೇ ಸಿದ್ಧತೆ ಇಲ್ಲದೆ ಏಕಾಏಕಿ ಖರೀದಿ ಪ್ರಾರಂಭ ಮಾಡಿದ್ದು ಇಲ್ಲಿ ಯಾವ ರೈತರು ಯಾವಾಗ ರಾಗಿಯನ್ನು ತರಬೇಕು ಎಂಬುದರ ಜೇಷ್ಠತಾ ಪಟ್ಟಿಯನ್ನು ಸಹ ಪ್ರಕಟಿಸಿಲ್ಲ. ಇದರಿಂದ ರೈತರಿಗೆ ತುಂಬಾ ಅನಾನುಕೂಲವಾಗುತ್ತಿದ್ದು ಈ ಬಗ್ಗೆ ಸಂಬಂದಪಟ್ಟ ಅಧಿಕಾರಿಗಳು ಕ್ರಮವಹಿಸಬೇಕಿದೆ.

ರಾಗಿ ಖರೀದಿಯೇ ತಡ ಹಣ ಖಾತೆಗೆ ಬರುವುದು ಯಾವಾಗ? : ಸರ್ಕಾರ ಡಿಸೆಂಬರ್‌ನಲ್ಲಿ ರೈತರಿಂದ ರಾಗಿ ನೊಂದಣಿ ಪ್ರಕ್ರಿಯೆ ಮುಗಿಸಿ ಜನವರಿಯಿಂದ ಮಾರ್ಚ್‌ನೊಳಗೆ ರೈತರಿಂದ ರಾಗಿ ಖರೀದಿಸಬೇಕೆಂದು ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದವರಿಗೆ ತಿಳಿಸಿದ್ದರೂ, ನಿಗಮದವರು ತಡವಾಗಿ ಮಾರ್ಚ್‌ನಲ್ಲಿ ರೈತರಿಂದ ರಾಗಿ ಖರೀದಿಸುತ್ತಿದ್ದಾರೆ. ಆದರೆ ರಾಗಿ ಖರೀದಿಯೇ ತಡವಾಗುತ್ತಿದ್ದು ರೈತರು ಕಷ್ಟಪಟ್ಟು ಬೆಳೆದ ರಾಗಿಯ ಹಣ ಇನ್ನೆಷ್ಟು ತಡವಾಗಿ ಬರುವುದೋ ಎಂಬ ಆತಂಕದಲ್ಲಿದ್ದಾರೆ.

ತಾಲೂಕಿನಲ್ಲಿ ಒಟ್ಟು 9454 ರೈತರು ಹೆಸರು ನೋಂದಾಯಿಸಿಕೊಂಡಿದ್ದು, 1,39,776ಸಾವಿರ ಕ್ವಿಂಟಾಲ್ ರಾಗಿ ಮಾರಾಟಕ್ಕೆ ನೊಂದಣಿಯಾಗಿದೆ.



ತುಮಕೂರಿನ ಶೆಟ್ಟಿಹಳ್ಳಿ ಗೇಟ್‌ನಲ್ಲಿರುವ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಯವರ ವರ್ಧಂತಿ ಮಹೋತ್ಸವವು ವಿಜೃಂಭಣೆಯಿಂದ ನಡೆಯಿತು.

# ನೈಟ್ ಕ್ಯಾಟೀನ್ ಕುಮಾರ್ ನಿಧನ



ತುಮಕೂರು ನಗರದ ಟೌನ್ ಹಾಲ್ ವೃತ್ತದ ಬಳಿ ನೈಟ್ ಕ್ಯಾಂಟೀನ್ ನಡೆಸುತ್ತಾ ಪ್ರತಿದಿನ ಹಸಿದವರಿಗೆ ಅನ್ನ ನೀಡುತ್ತಿದ್ದ ಕುಮಾರ್ ಹೃದಯಾಘಾತದಿಂದ ನಿಧನರಾಗಿದ್ದು, ಕೆಪಿಸಿಸಿ ಉಪಾಧ್ಯಕ್ಷ ಮುರಳೀಧರ ಹಾಲಪ್ಪ ಹಾಗೂ ಸಮಾಜ ಸೇವಕ ನಟರಾಜು ಮೃತರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

## ಮಗ ನಾಪತ್ತೆ : ತಾಯಿಯಿಂದ ದೂರು

ತುಮಕೂರು: ಗುಬ್ಬಿ ತಾಲ್ಲೂಕು ಚೇಳೂರು ಪೊಲೀಸ್ ಠಾಣೆ ವ್ಯಾಪ್ತಿ ಗೌರಿಪುರ ಗ್ರಾಮದ ಸುಮಾರು 26 ವರ್ಷದ ಕುಮಾರ ಜೆ.ಸಿ. ಎಂಬ ವ್ಯಕ್ತಿಯು 2021ರ ನವೆಂಬರ್ 12ರಂದು ಕಾಣೆಯಾಗಿರುವ ಬಗ್ಗೆ ಈತನ ತಾಯಿ ಶಾಂತಮ್ಮ ಠಾಣೆಗೆ ದೂರು ನೀಡಿದ್ದಾರೆ.

ಕಾಣೆಯಾದ ವ್ಯಕ್ತಿಯು 5 ಅಡಿ ಎತ್ತರ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ಬಲಗೈ ತೋಳಿನ ಮೇಲೆ ಕಪ್ಪು ಬಣ್ಣದ ಚುಕ್ಕೆ ಇರುತ್ತದೆ. ಕಾಣೆಯಾದ ಈತನ ಬಗ್ಗೆ ಸುಳಿವು ಸಿಕ್ಕಲ್ಲಿ ಮೊ.ಸಂ. 9480802961–35–21ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

## ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಗ್ರಾಮೀಣ ಉಪ ವಿಭಾಗ–2ರ ವ್ಯಾಪ್ತಿಯಲ್ಲಿ ದುರಸ್ತಿ ಕಾಮಗಾರಿ ಕೈಗೊಂಡಿರುವುದರಿಂದ ಮಾರ್ಚ್ 7ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ಹೆಗ್ಗೆರೆ ಹೊಸ ಬಡಾವಣೆ, ವಕ್ಕೋಡಿ, ಭೀಮಸಂದ್ರ ಹಳೆಗ್ರಾಮ, ಹೆಗ್ಗೆರೆ ಹಳೆಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

# ನಾಗವಲ್ಲಿ ಶಾಲೆಯ 1.21 ಕೋಟಿ ರೂ. ಅನುದಾನ ವಾಪಸ್

## ವಿಧಾನಸಭೆಯಲ್ಲಿ ಸರ್ಕಾರದ ಕ್ರಮಕ್ಕೆ ಗ್ರಾಮಾಂತರ ಶಾಸಕ ಸುರೇಶ ಗೌಡ ಉಗ್ರ ತರಾಟೆ



ಬೆಂಗಳೂರು : ತುಮಕೂರು ಗ್ರಾಮಾಂತರ ಕ್ಷೇತ್ರದ ನಾಗವಲ್ಲಿ ಸರ್ಕಾರಿ ಮಾದರಿ ಶಾಲೆ (ಕೆಪಿಎಸ್)ಯ ಕಟ್ಟಡ ನಿರ್ಮಾಣಕ್ಕೆ 1.21 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿ ಅದನ್ನು ವಾಪಸು ತೆಗೆದುಕೊಂಡ ಸರ್ಕಾರದ ಕ್ರಮವನ್ನು ಬಿಜೆಪಿ ಶಾಸಕ ಬಿ. ಸುರೇಶ ಗೌಡರು ಇಂದು ವಿಧಾನಸಭೆಯಲ್ಲಿ ಉಗ್ರವಾಗಿ ತರಾಟೆಗೆ ತೆಗೆದುಕೊಂಡರು.

ಪ್ರಶ್ನೋತ್ತರ ಅವಧಿಯಲ್ಲಿ ಶಾಸಕ :. ಕ ಹರೀಶ್ ಅವರ ಪ್ರಶ್ನೆಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಉತ್ತರ ಕೊಡುತ್ತ ಕಂಪನಿಗಳ ಸಾಮಾಜಿಕ ಹೊಣೆಗಾರಿಕೆ (ಸಿಎಸ್‌ಆರ್) ನೆರವಿನಡಿ ರಾಜ್ಯದಾದ್ಯಂತ 500 ಕೆಪಿಎಸ್ ಶಾಲೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದಾಗ ಸುರೇಶ ಗೌಡರು ಸಿಡಿದು ನಿಂತರು.

?ನನ್ನ ಕ್ಷೇತ್ರದ ನಾಗವಲ್ಲಿ ಶಾಲೆಗೆ 1.21 ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ ನಿರ್ಮಿಸಲು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಬಂದು ಶಂಕು ಸ್ಥಾಪನೆ ನೆರವೇರಿಸಿ ಹೋಗಿದ್ದರು. ಆ ಕಾಮಗಾರಿಗೆ ಟೆಂಡರ್ ಕೂಡ ಆಗಿತ್ತು. ಅಂಥ ಹಣವನ್ನು ವಾಪಸು ತೆಗೆದುಕೊಳ್ಳಲಾಗಿದೆ? ಎಂದು ಅವರು ಸದನದಲ್ಲಿ ಕಟುವಾಗಿ ಟೀಕಿಸಿದರು.

ಮಧ್ಯ ಪ್ರವೇಶಿಸಿದ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಅಧಿಕಾರಿಗಳು ಮತ್ತು ಸಚಿವರು ಇತ್ತ ಗಮನ ಕೊಟ್ಟು ಆ ಶಾಲೆಗೆ ನ್ಯಾಯ ಒದಗಿಸಿಕೊಡಬೇಕು ಎಂದು ಸೂಚಿಸಿದರು.

ಸುರೇಶಗೌಡರ ಆಕ್ರೋಶ ಸರಿ ಇದೆ, ಅವರಿಗೆ ಅನ್ಯಾಯ ಆಗಿರುವುದು ನಿಜ? ಎಂದು ಸಚಿವ ಮಧು ಬಂಗಾರಪ್ಪ ಸಮಾಧಾನ ಹೇಳಲು ಪ್ರಯತ್ನಿಸಿದಾಗಲೂ, ಇದು ಮೋಸದ ಮಾತು ಎಂದು ಶಾಸಕರು ಖಂಡಿಸಿದರು.

ಮೂರು ಸಾರಿ ಶಾಸಕನಾಗಿ ಆಯ್ಕೆಯಾಗಿರುವ ನನಗೂ ಘನತೆ ಗೌರವ ಇದೆ. ಶಾಲೆಯ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಿ, ಟೆಂಡರ್ ಕರೆದ ಹಂತದಲ್ಲಿ ಹಣವನ್ನು ವಾಪಸು ತೆಗೆದುಕೊಂಡ ಉದಾಹರಣೆ ಇದೆಯೇ? ಎಂದು ಅವರು ಪ್ರಶ್ನಿಸಿದರು. ಅವರ ನೆರವಿಗೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರೂ ಬಂದರು.

ಕೊನೆಗೆ ಮಧು ಬಂಗಾರಪ್ಪ ಅವರು ಈ ವಿಚಾರದಲ್ಲಿ ಸರ್ಕಾರದ ಕಡೆಯಿಂದ ಲೋಪವಾಗಿರುವುದು ನಿಜ, ತಾವು ನ್ಯಾಯ ಒದಗಿಸುವುದಾಗಿ ಭರವಸೆ ಕೊಟ್ಟ ನಂತರ ಸುರೇಶ ಗೌಡರು ಸಮಾಧಾನಗೊಂಡರು.

# ಮತ್ತಿಹಳ್ಳಿಯಲ್ಲಿ 'ನಮ್ಮೂರು ನಮ್ಮ ಕೆರೆ' ಕಮಗಾರಿಗೆ ಗುದ್ದಲಿ ಪೂಜೆ



ತಿಪಟೂರು : ತಾಲ್ಲೂಕಿನ ಮತ್ತಿಹಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ನಮ್ಮೂರು ನಮ್ಮ ಕೆರೆಯ ಕಾರ್ಯಕ್ರಮದ ಮತ್ತಿಹಳ್ಳಿ ಕೆರೆ ಕಾಮಗಾರಿಯ ಗುದ್ದಲಿ ಪೂಜೆಯನ್ನು ನೆರವೇರಿಸಿದರು.

ಗುದ್ದಲಿ ಪೂಜೆ ನೇರವೇರಿಸಿ ಮಾತನಾಡಿದ ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ಕ್ಷೇತ್ರ ಧರ್ಮಸ್ಥಳ ಯೋಜನೆ ಎಂದರೆ ಅನ್ನದಾನ, ವಿದ್ಯಾದಾನ, ಔಷಧದಾನ ಹಾಗೂ ಅಭಯದಾನ ಈ ನಾಲ್ಕು ದಾನಗಳಿಗೆ ಹೆಸರಾಗಿದೆ ಇವುಗಳಲ್ಲಿ ಒಂದಾದಂತಹ ಅಭಯದಾನದ ಪ್ರಕಾರ ಮತ್ತಿಹಳ್ಳಿ ಗ್ರಾಮಸ್ಥರ ಬೇಡಿಕೆಯ ಮೇರೆಗೆ ಕೆರೆಯ ಅಭಿವೃದ್ದಿಯನ್ನು ಸುಮಾರು 14 ಲಕ್ಷದ ಹಂತದಲ್ಲಿ ಕಾಮಗಾರಿ ಪ್ರಾರಂಭಿಸಲು ನಿರ್ಧರಿಸಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದೇವೆ ಮತ್ತು ಈ ಜಿಲ್ಲೆಯಲ್ಲಿ ಸುಮಾರು 70 ಕೆರೆಯನ್ನು ನಿರ್ಮಾಣ ಮಾಡಲಾಗಿದೆ. ಇದರಿಂದ ಸುಮಾರು 1 ಲಕ್ಷ ಜನ ರೈತರಿಗೆ ನೀರಿನ ವ್ಯವಸ್ಥೆಯಾಗಲಾಗಿದೆ. ಈ ಎಲ್ಲಾ ಕೆಲಸಗಳಿಗೂ ಮುಖ್ಯ ಕಾರಣ ಶ್ರೀ ಕ್ಷೇತ್ರ ಧರ್ಮಸ್ಥಳದ ನಮ್ಮ ಊರು, ನಮ್ಮ ಕೆರೆ ಯೋಜನೆ. ಆದ್ದರಿಂದ ಈ ಗ್ರಾಮದ ಜನ ಕೆರೆಗೆ ತ್ಯಾಜ್ಯ ವಸ್ತುಗಳನ್ನು ಹಾಕದೆ ಸ್ವಚ್ಚತೆಯನ್ನು ಕಾಪಾಡುವುದು ಎಲ್ಲರ ಹೊಣೆಯಾಗಿರುತ್ತದೆ. ಈ ಯೋಜನೆಯಡಿಯಲ್ಲಿ ಸುಮಾರು 810 ಕೆರೆಗಳನ್ನು ನಿರ್ಮಾಣ ಮಾಡಿದ್ದೇವೆ ಅದರಲ್ಲಿ 620 ಕೆರೆಗಳಲ್ಲಿ ಇದುವರೆಗೆ ನೀರು ಬತ್ತಿಲ್ಲ, ಶ್ರೀ ಕ್ಷೇತ್ರ ಮಂಜುನಾಥ ಸ್ವಾಮಿ ಯ ತೀರ್ಥ ಸದಾಕಾಲ ಇರುವ ರೀತಿ ಈ ಕೆರೆಗಳಲ್ಲಿಯ ನೀರು ಸಹ ಬತ್ತದಂತೆ ಇರಲಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಹಾಲು ಮಹಾ ಮಂಡಳದ ನಿರ್ದೇಶಕ ಮಾದಿಹಳ್ಳಿ ಪ್ರಕಾಶ್ ಮಾತನಾಡಿ ಕೆರೆ ಕಟ್ಟೆಗಳ ಸಂರಕ್ಷಣೆಯಿಂದ ಅಂತರ್ಜಲ ವೃದ್ಧಿಯಾಗುವ ಜೊತೆಗೆ ಕೃಷಿ, ಜನ–ಜಾನುವಾರುಗಳಿಗೂ ಅನುಕೂಲವಾಗಿದ್ದು ಈ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಕೆರೆಗಳನ್ನು ಪುನಃಶ್ಚೇತನ ಗೊಳಿಸುವ ಮೂಲಕ ಪುಣ್ಯದ ಕೆಲಸವನ್ನು ಕೈಗೊಂಡಿದೆ., ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಕೆರೆಗಳ ಪುನಃಶ್ಚೇತನ ಸೇರಿದಂತೆ ಹತ್ತಾರು ಯೋಜನೆಗಳನ್ನು ಹಾಕಿಕೊಂಡು ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿದ್ದು ಅದರಲ್ಲೂ ಕೆರೆಕಟ್ಟೆಗಳನ್ನು ಅಭಿವೃದ್ಧಿ ಪಡಿಸುವ ಕಾರ್ಯ ಅತ್ಯಂತ ಪವಿತ್ರ ಕಾರ್ಯವಾಗಿದ್ದು ಕೆರೆಯಲ್ಲಿ ನೀರು ಶೇಖರಣೆಯಾದರೆ ಅಂತರ್ಜಲ ವೃದ್ಧಿಯಾಗಿ ಸಾವಿರಾರು ರೈತರು, ಜಾನುವಾರುಗಳು, ಪಶುಪಕ್ಷಿಗಳು, ಮರಗಿಡಗಳು ಬದುಕುವ ಮೂಲಕ ಉತ್ತಮ ಪರಿಸರ ಸೃಷ್ಟಿಯಾಗಲಿದೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಈ.ಜಿ ಶಿವರಾಜ್ ಮಾತನಾದರು. ತಾ.ಯೋಜನಾಧಿಕಾರಿ ಕೆ.ಉದಯ್, ಮತ್ತಿಹಳ್ಳಿ ಗ್ರಾ.ಪ ಅಧ್ಯಕ್ಷೆ ಜ್ಯೋತಿ, ಸದಸ್ಯರಾದ ಹರೀಶ್ ಗೌಡ, ರೇಣುಕಮ್ಮ, ಪಟೇಲ್ ಜಯಣ್ಣ, ಕೃಷಿ ಮೇಲ್ವಿಚಾರಕ ಪ್ರಮೋದ್, ಮೇಲ್ವಿಚಾರಕಿ ಅನಿತ, ಜನಜಾಗೃತಿ ವೇದಿಕೆ ಸದಸ್ಯರಾದ ಶ್ಯಾಮ್ ಸುಂದರ್, ಮಲ್ಲಿಕಪ್ಪಾಚಾರ್, ಸೇವಾಪ್ರತಿನಿಧಿ ಕಮಲಮ್ಮ, ಸಮಿತಿ ಅಧ್ಯಕ್ಷ ಹರೀಶ್, ಉಪಾಧ್ಯಕ್ಷ ಶ್ರೀಕಂಠಯ್ಯ, ಡೈರಿ ಅಧ್ಯಕ್ಷ ಶಿವನಂದಸ್ವಾಮಿ, ಪರಮೇಶ್ವರಯ್ಯ, ಲಿಂಗರಾಜು, ಜಯಣ್ಣ, ಚನ್ನೇಗೌಡ, ಶಂಕರಪ್ಪ, ಚಿದಾನಂದ್, ಷಡಕ್ಷರಿ, ಓಂಕಾರಮೂರ್ತಿ, ಈಶ್ವರಯ್ಯ, ಲಿಂಗರಾಜು, ರಮೇಶ್, ಸುರೇಶ್, ಸೇರಿದಂತೆ ಗ್ರಾಮಸ್ಥರು ಇದ್ದರು.

# 'ಅನ್ನಭಾಗ್ಯ' ಇನ್ಮುಂದೆ ಡಿಬಿಟಿ ಇಲ್ಲ: ಕುಂಞ ಅಹಮದ್



ತುರುವೇಕೆರೆ: ರಾಜ್ಯ ಸರ್ಕಾರ ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ 10 ಕೆ.ಜಿ. ಅಕ್ಕಿ ಘೋಷಿಸಿತ್ತು. ಈ ಪೈಕಿ 5 ಕೆ.ಜಿ. ಅಕ್ಕಿ ಬದಲು ಡಿಬಿಟಿ ಮೂಲಕ 170 ರೂಗಳನ್ನು ಖಾತೆಗೆ ಜಮಾ ಮಾಡುತ್ತಿತ್ತು. ಫೆಬ್ರವರಿ ಮತ್ತು ಮಾರ್ಚ್ ತಿಂಗಳಿಂದ ಡಿಬಿಟಿ ಬದಲಾಗಿ 5 ಕೆ.ಜಿ ಅಕ್ಕಿಯನ್ನೇ ವಿತರಿಸಲಾಗುತ್ತದೆ ಎಂದು ತಹಸೀಲ್ದಾರ್ ಕುಂಞ ಅಹಮದ್ ತಿಳಿಸಿದರು.

ಮಾಧ್ಯಮ ದೊಂದಿಗೆ ಮಾತನಾಡಿದ ಅವರು, ಸರ್ಕಾರದ ಪತ್ರದಲ್ಲಿ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ ಮತ್ತು ಆದ್ಯತಾ ಪಡಿತರ ಚೀಟಿಗಳ ಪ್ರತಿ ಫಲಾನುಭವಿಗೆ ರಾಷ್ಟ್ರೀಯ ಅಹಾರ ಭದ್ರತಾ ಕಾಯ್ದೆಯನ್ವಯ ವಿತರಿಸಲಾಗುವ 05 ಕೆ.ಜಿ ಆಹಾರ ಧಾನ್ಯದೊಂದಿಗೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ 05 ಕೆ.ಜಿ ಅಹಾರ ಧಾನ್ಯದ ಬದಲಾಗಿ ಪ್ರತಿ ಕೆ.ಜಿ.ಗೆ ರೂ.34/–ರಂತೆ ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ರೂ.170/– ರಂತೆ ಹಣವನ್ನು ವರ್ಗಾಯಿಸಲಾಗುತ್ತಿರುತ್ತದೆ.

ಸರ್ಕಾರದ ಆದೇಶದಲ್ಲಿ ಫೆಬ್ರವರಿ 2025ರ ಮಾಹೆಯಿಂದ ಜಾರಿಗೆ ಬರುವಂತೆ ನೇರ ನಗದು ವರ್ಗಾವಣೆ (ಡಿಬಿಟಿ) ಬದಲಾಗಿ ಅನ್ನಭಾಗ್ಯ ಯೋಜನೆಯಡಿ ಸರ್ಕಾರದ ಆದೇಶದ ಮಾರ್ಗಸೂಚಿಯಂತೆ ಏಕ–ಸದಸ್ಯ ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕ್ಕಿಂತ ಹೆಚ್ಚಿನ ಸದಸ್ಯರುಳ್ಳ ಎಎವೈ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಮತ್ತು ಪಿಎಚ್‌ಎಚ್ ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಪ್ರತಿ ಮಾಹೆ ಹೆಚ್ಚುವರಿಯಾಗಿ 05 ಕೆಜಿ ಅಕ್ಕಿಯನ್ನು ಹಂಚಿಕೆ ನೀಡಬೇಕಾಗಿರುತ್ತದೆ. ಈಗಾಗಲೇ ಫೆಬ್ರವರಿ 2025ರ ಮಾಹೆಯ ಪಡಿತರ ವಿತರಣೆ ಮುಕ್ತಾಯವಾಗಿರುವುದರಿಂದ ಫೆಬ್ರವರಿ ಮತ್ತು ಮಾರ್ಚ್–2025ರ ಮಾಹೆಗಳ ಡಿಬಿಟಿ ಬದಲಾಗಿ ಹೆಚ್ಚುವರಿ 05 ಕೆಜಿ ಅಕ್ಕಿಯನ್ನು ಮಾರ್ಚ್–2025ರ ಮಾಹೆಯಲ್ಲಿ ಹಂಚಿಕೆ ನೀಡಲಾಗಿರುತ್ತದೆ ಎಂದರು. ಮಾರ್ಚ್ ತಿಂಗಳಲ್ಲಿ ಬಿಪಿಎಲ್ ಪಡಿತರ ಚೀಟಿದಾರರಿಗೆ ಉಚಿತವಾಗಿ ಫೆಬ್ರವರಿ ತಿಂಗಳ 5 ಕೆ.ಜಿ ಹಾಗೂ ಮಾರ್ಚ್ ತಿಂಗಳ 10 ಕೆ.ಜಿ ಅಕ್ಕಿಯನ್ನು ಕುಟುಂಬದ ಪ್ರತಿ ಸದ ಸ್ಯರಿಗೆ ನೀಡಲಾಗುವುದು. ಅಂತ್ಯೋದಯ ಪಡಿತರ ಚೀಟಿದಾರರಿಗೆ 3 ಸದಸ್ಯರಿಂದ 35 ಕೆ.ಜಿ, 4 ಸದಸ್ಯರಿದ್ದರೆ 45, 5 ಜನರಿದ್ದರೆ 65, 6 ಸದಸ್ಯರಿದ್ದರೆ 85, 7 ಸದಸ್ಯರಿದ್ದರೆ 106, 8 ಸದಸ್ಯರಿದ್ದರೆ 125, 9 ಸದಸ್ಯರಿದ್ದರೆ 145 ಕೆ.ಜಿ. ಅಕ್ಕಿ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಶಿರಸ್ತೇದಾರ್ ಸುನಿಲ್ ಕುಮಾರ್, ಆಹಾರ ನಿರೀಕ್ಷರಾದ ಕೃಷ್ಣೇಗೌಡ, ಹರೀಶ್ ಉಪಸ್ಥಿತರಿದ್ದರು.

**Printed by:** H.S.PARAMESH, SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101
**Published by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **owned by** RADHIKA A.R., D/O RAMAKRISHNAIAH, BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132 **Printed at** SRI LAKSHMINARASIMHA OFFSET PRINTERS, 7TH CROSS, SRIRAMA NAGARA, TUMAKURU, TUMAKURU DIST., KARNATAKA PIN-572101 **and published at** TUMAKURU. BEHAIND AC OFFICE, SWEET WATER BOREWELL ROAD, MADHUGIRI, MADHUGIRI TALUK, TUMAKURU DIST. KARNATAKA PIN-572132
**Editor:** RADHIKA A.R. "**KARNATAKA SUCCESS NO 1**" KANNADA Daily News Paper